**ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಿರುಗುಪ್ಪ**

**ಸಿ.ಸಿ. ನಂ. 207/2018**

**ಡಿ.ಡಬ್ಲ್ಯೂಃ 1**

**ಸಾಕ್ಷಿಗೆ ದಿನಾಂಕಃ22.08.2025 ರಂದು ಪ್ರಮಾಣ ವಚನ ಬೋಧಿಸಲಾಯಿತು**

**ಮುಂದುವರೆದ ಪಾಟೀಸವಾಲು ಆರೋಪಿ ಪರ ಶ್ರೀಃ ಕೆ.ವಿ.ಕೆ. ವಕೀಲರಿಂದ**

2. ವ್ಯವಸಾಯದ ಆದಾಯದಿಂದ ಬಂದ ಹಣವನ್ನು ಆರೋಪಿಗೆ ಕೊಟ್ಟಿದ್ದೇನೆ ಎಂದು ನಾನು ದೂರಿನಲ್ಲಿ ಹೇಳಿಲ್ಲ ಎಂದರೆ ಸರಿ. ಆದಾಯ ತೆರಿಗೆ ದಾಖಲೆಗಳನ್ನು ಹಾಜರು ಪಡಿಸಿದ್ದೇನೆ ಆರೋಪಿಗೆ ನಾನು ಹಣವನ್ನು ಕೊಟ್ಟಿಲ್ಲ ಎಂಬ ಸತ್ಯ ಹೊರ ಬರುತ್ತದೆ ಎಂಬ ಕಾರಣಕ್ಕೆ ಆದಾಯ ತೆರಿಗೆ ದಾಖಲೆಗಳನ್ನು ಹಾಜರು ಪಡಿಸಿದೆ ನಾನು ಕೇವಲ ಪಹಣಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೆ ಹಣ ನೀಡಿದ್ದೇನೆ ಎಂದು ಹೇಳುವ ದಿನ ನನ್ನ ಬಳಿ ಅಷ್ಟು ಹಣ ಇದ್ದ ಬಗ್ಗೆ ದಾಖಲೆಯನ್ನು ಹಾಜರು ಪಡಿಸಿಲ್ಲ ಎಂದರೆ ಸರಿ. ಸಾಕ್ಷಿ ಸ್ವಇಚ್ಛೆಯಿಂದ ತಾನು ವ್ಯವಸಾಯಗಾರ ಇರುವುದರಿಂದ ದಾಖಲೆಗಳು ಇಲ್ಲ ಎಂದು ನುಡಿಯುತ್ತಾರೆ. ನಿಪಿಃ1 ರಲ್ಲಿ ಬರವಣಿಗೆಗಳು ವ್ಯತ್ಯಾಸ ಇವೆ ಎಂದರೆ ಸರಿಯಲ್ಲ. ಎಲ್ಲಾ ಬರವಣಿಗೆಗಳನ್ನು ಆರೋಪಿಯೇ ಬರೆದಿರುತ್ತಾರೆ. ಆ ರೀತಿ ನಾನು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

3. ನಿಪಿಃ1 ರಲ್ಲಿನ ಬರವಣಿಗೆಗೂ ಮತ್ತು ನನ್ನ ಸೊಸೆ ಸಲ್ಲಿಸಿರುವ ಚೆಕ್ ಪ್ರಕರಣದಲ್ಲಿನ ಚೆಕ್ ಬವಣಿಗೆಗೂ ವ್ಯತ್ಯಾಸ ಇದೆ ಎಂದರೆ ಸರಿಯಲ್ಲ. ನಾನು ಸುಳ್ಳು ದಾಖಲೆಗಳನ್ನು ಸೃಷ್ಟಿ ಮಾಡಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು-ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೆ. ಸರಿ ಇದೆ.

**ಸಿವಿಲ್ ಮತ್ತು ಜೆ.ಎಂ.ಎಫ್.ಸಿ.**

**ನ್ಯಾಯಾಧೀಶರು, ಸಿರುಗುಪ್ಪ .**